ಹುದ್ದೆಗಳನ್ನು ಸೃಜಿಸಿದಲ್ಲಿ ಮಹಾನಗರಪಾಲಿಕೆಗೆ ಹೆಚ್ಚಿನ ಆರ್ಥಿಕ ಹೊರೆ ಬೀಳುವುದರಿಂದ, ನಗರಪಾಲಿಕೆಯ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕೆ.ಇ.ಬಿ. ಸಬ್ ಡಿವಿಜನ್‌ನನ್ನು ತೆಗೆಯುವ ಬಗ್ಗೆ ಪರಿಶೀಲಿಸಲಾಗುವುದು.

ಹುಬ್ಬಳ್ಳಿ-ಧಾರವಾಡ ಮಹಾನಗರ ಸಭೆಯ ಚುನಾವಣಾ ಸ್ಥಾನ ಮೀಸಲಾತಿ ಬಗ್ಗೆ

111 - ಶ್ರೀ ಜಗದೀಶ ಶೆಟ್ಟರ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ನಗರಾಭಿವೃದ್ಧಿ ಕಾಡಾ ಮತ್ತು ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹುಬ್ಬಳ್ಳಿ-ಧಾರವಾಡ ಮಹಾನಗರ ಸಭೆಯ ಚುನಾವಣಾ ಡಿವಿಜನ್‌ಗಳ ಪುನರ್ ವಿಂಗಡಣೆ ಮತ್ತು ಸದರಿ ಡಿವಿಜನ್‌ಗಳ ಕುರಿತು ಸ್ಥಾನಮೀಸಲಾತಿ ನಿರ್ಧರಿಸಿದ ಕ್ರಮಗಳು ಸರಿಯಾಗಿ ನಡೆದಿರುವುದಿಲ್ಲ ಎನ್ನುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?*

ಶ್ರೀ ವೈಜನಾಥ್ ಪಾಟೀಲ್ (ನಗರಾಭಿವೃದ್ಧಿ ಕಾಡಾ ಮತ್ತು ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಸಚಿವರು) :

ಅ) ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯಲ್ಲಿ ಮಾಡಿರುವ ಕ್ಷೇತ್ರವಿಂಗಡಣೆ ಹಾಗೂ ಮೀಸಲಾತಿ ನಿಯಮಾನುಸಾರ ಇವೆ.

ಆ) ಉದ್ಭವಿಸುವುದಿಲ್ಲ

ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿರುವ ರಸ್ತೆಗಳ ಒಟ್ಟು ಉದ್ದಳತೆಯ ಕುರಿತು

187 - ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿರುವ ರಸ್ತೆಗಳ ಒಟ್ಟು ಉದ್ದಳತೆ ಎಷ್ಟು, ಈ ರಸ್ತೆಗಳಲ್ಲಿ ಎಷ್ಟು ರಸ್ತೆಗಳು ಸುಸ್ಥಿತಿಯಲ್ಲಿವೆ? ರಸ್ತೆಗಳ ದುಸ್ಥಿತಿಗೆ ಕಾರಣಗಳೇನು, ದುಸ್ಥಿತಿಯಲ್ಲಿರುವ ರಸ್ತೆಗಳ ಸುಧಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಕಾಡಾ ಮತ್ತು ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಸಚಿವರು) :

ಅ) ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿರುವ ರಸ್ತೆಗಳ ಒಟ್ಟು ಉದ್ದಳತೆ 550 ಕಿ.ಮೀ. ಈ ರಸ್ತೆಗಳಲ್ಲಿ ಸುಮಾರು 220 ಕಿ.ಮೀ. ರಸ್ತೆಗಳು ಸುಸ್ಥಿತಿಯಲ್ಲಿವೆ. ಇನ್ನುಳಿದ ರಸ್ತೆಗಳ ದುಸ್ಥಿತಿಗೆ ಕಾರಣಗಳು ಈ ಕೆಳಗಿನಂತಿವೆ.

1) ಒಳಚರಂಡಿ ಜೋಡಣೆ
2) ಒಳಚರಂಡಿ ರಿಪೇರಿ
3) ಹೊಸ ನಳಗಳ ಜೋಡಣೆ
4) ನಳಗಳ ರಿಪೇರಿ
5) ನಳಗಳ ಸ್ಥಳಾಂತರ
6) ನೀರು ಪೂರೈಕೆ ಕೊಳವೆ ರಿಪೇರಿ
7) ನೀರು ಪೂರೈಕೆ ಕೊಳವೆ ಜೋಡಣೆ
8) ವಿದ್ಯುತ್ ಕೇಬಲ್ ಜೋಡಣೆ